ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿ ಕೋವಿಡ್-19 ನಿಯಂತ್ರಣಕ್ಕಾಗಿ ಕೈಗೊಂಡ ಕ್ರಮಗಳ ಕುರಿತು ಮಾಹಿತಿ

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :-

310 (468) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ :-

(ಅ) ರಾಜ್ಯದಲ್ಲಿ ಸ್ಥಾಪಿಸಲಾದ ಕೋವಿಡ್ ಕೇರ್ ಕೇಂದ್ರಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಆರೈಕೆ ಪಡೆದ ರೋಗಿಗಳ ಸಂಖ್ಯೆ ಎಷ್ಟು ; ಪ್ರತಿ ರೋಗಿಗಳ ಚಿಕಿತ್ಸೆಗೆ ಸರ್ಕಾರದಿಂದ ನಿರ್ದಿಷ್ಟಪಡಿಸಿದ ಮೊತ್ತವೆಷ್ಟು ; ಕೋವಿಡ್ ಕೇರ್ ಕೇಂದ್ರಗಳ ನಿರ್ವಹಣೆಗೆ ಮತ್ತು ರೋಗಿಗಳ ಆರೈಕೆಗೆ ಬಿಡುಗಡೆ ಮಾಡಲಾದ ಅನುದಾನವೆಷ್ಟು ; ಮಾಡಲಾಗಿರುವ ವೆಚ್ಚವೆಷ್ಟು ; ಮತ್ತು ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು ; (ಜಿಲ್ಲಾವಾರು, ಕೇಂದ್ರವಾರು, ತಿಂಗಳವಾರು ಮಾಹಿತಿಯನ್ನು ಒದಗಿಸುವುದು)

(ಆ) ಕರೋನಾ ವೈರಸನ್ನು ನಿಯಂತ್ರಿಸುವ ನಿಟ್ಟಿನಲ್ಲಿ ತಾತ್ಕಾಲಿಕವಾಗಿ ನೇಮಕಾತಿ ಮಾಡಿಕೊಂಡ ನೌಕರರ ಸಂಖ್ಯೆ ಎಷ್ಟು ;ಈ ನೌಕರರ ವೇತನಕ್ಕಾಗಿ ಬಿಡುಗಡೆಯಾದ ಅನುದಾನವೆಷ್ಟು ; ವೆಚ್ಚ ಮಾಡಿದ ಅನುದಾನವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು; (ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು)

(ಇ) ಸರಕಾರದಿಂದ ಜಿಲ್ಲಾಡÀಳಿತಕ್ಕೆ ನೀಡಲಾದ ಅಧಿಕಾರದ ಆಧಾರದ ಮೇಲೆ ಕೋವಿಡ್-19ರ ನಿಯಂತ್ರಣಕ್ಕಾಗಿ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಡೆಸಲಾದ ಸಭೆಗಳೆಷ್ಟು ; ಆ ಸಭೆಯಲ್ಲಿ ಭಾಗವಹಿಸಿದ ಅಧಿಕಾರಿಗಳು ಯಾರು ; ಆ ಸಭೆಗಳಲ್ಲಿ್ಲ ತೆಗೆದುಕೊಂಡ ತೀರ್ಮಾನಗಳು ಯಾವುವು ? (ಸಭಾ ನಡವಳಿಯ ಪ್ರತಿಯನ್ನು ಒದಗಿಸುವುದು)